**Bangalore**
**Regional News**
**31.05.2025 / 2.30 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕರ ಶೀಘ್ರ ನೇಮಕಾತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶನ
2. ದ್ವೇಷ ಭಾಷಣ ಮಾಡುವವರ ವಿರುದ್ಧ ಕಠಿಣ ಕಾನೂನು ಜಾರಿಗೆ ಚಿಂತನೆ - ಸಚಿವ ದಿನೇಶ್ ಗುಂಡೂರಾವ್
3. ವಿಶ್ವದ ಕೌಶಲ್ಯ ರಾಜಧಾನಿಯಾಗುವತ್ತ ಭಾರತ ದಾಪುಗಾಲು - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
4. ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ; ಸರ್ಕಾರಿ ಅಧಿಕಾರಿಗಳ ನಿವಾಸಗಳಲ್ಲಿ ಶೋಧ

<><><><>

ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ನೇಮಕಾತಿ ಮಾಡಿಕೊಳ್ಳಲು ಸರಿಯಾಗಿ ಕ್ರಮ ವಹಿಸಲಾಗುತ್ತಿಲ್ಲ. ಅಧಿಕಾರಿಗಳು ಈ ಬಗ್ಗೆ ಗಮನಹರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು. ಬೆಂಗಳೂರಿನಲ್ಲಿ ನಡೆದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ನಿರುದ್ಯೋಗ ಸಮಸ್ಯೆ ಇರುವ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ನೇಮಕಾತಿ ಬಗ್ಗೆ ಆಸಕ್ತಿ ವಹಿಸಬೇಕು. ಇವರಿಗೆ ಗೌರವ ಧನ ನೀಡಲಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ನೇಮಕಾತಿಗೆ ಆಗದಿರುವುದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು. ಬಾಲ್ಯ ವಿವಾಹ ತಡೆಗಟ್ಟಲು ಜಿಲ್ಲಾ ಸಮಿತಿಗಳು ಸಕ್ರಿಯವಾಗಬೇಕು. ೭೦೦ ಬಾಲ್ಯ ವಿವಾಹ ಪ್ರಕರಣಗಳು ಘಟಿಸಿದ್ದು, ಬಾಲ್ಯ ವಿವಾಹ ತಡೆಗಟ್ಟಲು ಕ್ರಮ ತೆಗೆದುಕೊಳ್ಳಬೇಕು ಎಂದು ಮುಖ್ಯಮಂತ್ರಿಗಳು ನಿರ್ದೇಶಿಸಿದರು. ವಿಜಯನಗರ ಜಿಲ್ಲೆಯಲ್ಲಿ ಅಪೌಷ್ಟಿಕತೆ ಮಟ್ಟ ಶೇಕಡ ೫.೫೩ ರಷ್ಟಿದೆ. ಬೀದರ್‌ನಲ್ಲಿ ಶೇಕಡ ೫.೬, ಬಳ್ಳಾರಿ ಜಿಲ್ಲೆಯಲ್ಲಿ ಶೇಕಡ ೪.೨೯ ರಷ್ಟಿದೆ. ಮಕ್ಕಳ ಪೌಷ್ಠಿಕತೆಗಾಗಿ ಶಾಲೆಗಳಲ್ಲಿ ಒದಗಿಸಲಾಗುವ ಹಾಲು, ಮೊಟ್ಟೆ ಸಮರ್ಪಕವಾಗಿ ನೀಡಲಾಗುತ್ತಿರುವ ಬಗ್ಗೆ ಪರಿಶೀಲನೆ ನಡೆಸಬೇಕು. ಅಪೌಷ್ಟಿಕತೆ ಮಟ್ಟವನ್ನು ಶೇಕಡ ೧ ಕ್ಕೆ ಇಳಿಸಲು ಕ್ರಮ ವಹಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

<><><><>

ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಪೋಸ್ಟ್ ಹಾಗೂ ದ್ವೇಷ ಭಾಷಣ ಮಾಡುವವರ ವಿರುದ್ಧ ಕಾನೂನನ್ನು ಬಲಪಡಿಸುವ ಅಗತ್ಯವಿದೆ. ಈ ಬಗ್ಗೆ ಮುಂದಿನ ಅಧಿವೇಶನದಲ್ಲಿ ಕಠಿಣ ಕಾನೂನು ಜಾರಿಗೊಳಿಸುವ ನಿಟ್ಟಿನಲ್ಲಿ ಕ್ರಮ ವಹಿಸಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗೂಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸಾರ್ವಜನಿಕ ಅಹವಾಲು ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಲ್ಲೆ, ಹತ್ಯೆ ಸೇರಿದಂತೆ ಕೋಮು ಗಲಭೆ ಹಾಗೂ ಪ್ರಚೋದನೆಯ ಕೃತ್ಯಗಳಲ್ಲಿ ತೊಡಗಿರುವವರು ಅಕ್ರಮ ಚಟುವಟಿಕೆಗಳಲ್ಲೂ ಭಾಗಿಯಾಗಿರುತ್ತಾರೆ. ಇದಕ್ಕಾಗಿ ಕಠಿಣ ಕಾನೂನಿನ ಅಗತ್ಯವಿದೆ ಎಂದರು. ಪ್ರಚೋದನೆಯ ಪೋಸ್ಟ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹಂಚುವವರಿಗೂ ಸಂಘಟನೆಯ ಬೆಂಬಲ, ರಾಜಕೀಯ ರಕ್ಷಣೆ ಇದೆ. ಕೋಮು ಸಂಘರ್ಷ ತಡೆಯಲು ಈಗಾಗಲೇ ವಿಶೇಷ ಕಾರ್ಯಪಡೆ ರಚಿಸಲಾಗಿದೆ. ಈ ಮೂಲಕ ಎಲ್ಲಾ ರೀತಿಯ ಕಾನೂನು ಬಾಹಿರ ಚಟುವಟಿಕೆಗಳಿಗೆ ಇತಿಶ್ರೀ ಹಾಡಲಾಗುವುದು ಎಂದು ಸಚಿವ ದಿನೇಶ್ ಗೂಂಡೂರಾವ್ ಸ್ಪಷ್ಟಪಡಿಸಿದ್ದಾರೆ.

<><><><>

ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳು, ನೀತಿಗಳು ಮತ್ತು ಸಂಸ್ಥೆಗಳು ಯುವಕರನ್ನು ಉತ್ತಮ ಜೀವನಕ್ಕಾಗಿ ಸಿದ್ಧಪಡಿಸುತ್ತಿವೆ. ದೇಶದ ಆರ್ಥಿಕತೆ ಮತ್ತು ಸ್ವಾವಲಂಬನೆ ಬಲಪಡಿಸುತ್ತಿವೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದಲ್ಲಿ 'ದಿ ಸೆಂಟರ್ ಫಾರ್ ಫ್ಯೂಚರ್ ಸ್ಕಿಲ್ಸ್' ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಈ ಪ್ರಯತ್ನಗಳಿಂದಾಗಿ, ಇಂದು ಭಾರತವು ವಿಶ್ವದ ಕೌಶಲ್ಯ ರಾಜಧಾನಿಯಾಗುವತ್ತ ಸಾಗುತ್ತಿದೆ ಎಂದರು. ದೇಶದ ಒಟ್ಟಾರೆ ಅಭಿವೃದ್ಧಿ ಮತ್ತು ಸ್ವಾವಲಂಬನೆಗೆ ಕೌಶಲ್ಯ ಶಿಕ್ಷಣವು ಮೂಲಭೂತ ಅವಶ್ಯಕತೆಯಾಗಿದೆ. ಪ್ರತಿಯೊಬ್ಬ ಯುವಕರು ಜ್ಞಾನದ ಜೊತೆಗೆ ಪ್ರಾಯೋಗಿಕ ಕೌಶಲ್ಯಗಳನ್ನು ಹೊಂದಿದಾಗ ಮಾತ್ರ 'ಕೌಶಲ್ಯಯುತ ಭಾರತ, ಸಮರ್ಥ ಭಾರತ'ದ ಕನಸು ನನಸಾಗುತ್ತದೆ ಎಂದು ಹೇಳಿದರು.

<><><><>

ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ಗದಗ ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಗಂಗಾಧರ ಶಿರೋಳ ಅವರ ಮನೆ ಸೇರಿದಂತೆ ಅವರ ಸಂಬಂಧಿಕರ ಮನೆ ಮೇಲೆ ಲೋಕಾಯುಕ್ತ ಪೊಲೀಸರು ಇಂದು ದಾಳಿ ಮಾಡಿದ್ದಾರೆ. ಗದಗ ನಗರದ ಹುಡ್ಕೋ ಕಾಲೊನಿಯ ಗಂಗಾಧರ ಶಿರೋಳ ಅವರ ಮನೆ ಹಾಗೂ ನಗರದ ಸಂಬಂಧಿಕರ ಮತ್ತು ವಿಜಯನಗರ ಜಿಲ್ಲೆಯ ಹೂವಿನ ಹಡಗಲಿ ಹಾಗೂ ಹಾವೇರಿ ಜಿಲ್ಲೆಯಲ್ಲಿ ಅವರ ಸಂಬಧಿಕರ ಮನೆ ಮೇಲೆ ಲೋಕಾಯುಕ್ತ

ಪೋಲಿಸರು ಏಕ ಕಾಲಕ್ಕೆ ದಾಳಿ ಮಾಡಿ, ದಾಖಲೆಗಳ ಪರಿಶೀಲನೆ ನಡೆಸಿದರು. ಲೋಕಾಯುಕ್ತ ಎಸ್ಪಿ ಹನಮಂತರಾಯ, ಡಿವೈಎಸ್ಪಿ ವಿಜಯ ಬಿರಾದಾರ ನೇತೃತ್ವದಲ್ಲಿ ದಾಳಿ ನಡೆಯಿತು.

<><><>

ರಾಜ್ಯದ ವಿವಿಧೆಡೆ ಲೋಕಾಯುಕ್ತ ದಾಳಿ ನಡೆದಿದೆ. ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಕೆ ಆರೋಪದ ಹಿನ್ನಲೆಯಲ್ಲಿ ಗದಗ ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಗಂಗಾಧರ ಶಿರೋಳ ಅವರ ಮನೆ ಸೇರಿದಂತೆ  ಅವರ ಸಂಬಂಧಿಕರ ಮನೆ ಮೇಲೆ ಲೋಕಾಯುಕ್ತ ಪೊಲೀಸರು ಇಂದು ದಾಳಿ ಮಾಡಿದ್ದಾರೆ. ಗದಗ ನಗರದ ಹುಡ್ಕೋ ಕಾಲೊನಿಯ ಗಂಗಾಧರ ಶಿರೋರ ಅವರ ಮನೆ ಹಾಗೂ ನಗರದ ಸಂಬಂಧಿಕರ ಮತ್ತು ವಿಜಯನಗರ ಜಿಲ್ಲೆಯ ಹೂವಿನ ಹಡಗಲಿ ಹಾಗೂ ಹಾವೇರಿ ಜಿಲ್ಲೆಯಲ್ಲಿ ಅವರ ಸಂಬಧಿಕರ ಮನೆ ಮೇಲೆ ಲೋಕಾಯುಕ್ತ ಪೋಲಿಸರು ಏಕ ಕಾಲಕ್ಕೆ ದಾಳಿ ಮಾಡಿ, ದಾಖಲೆಗಳ ಪರಿಶೀಲನೆ ನಡೆಸಿದರು. ಲೋಕಾಯುಕ್ತ ಎಸ್ಪಿ ಹನಮಂತರಾಯ, ಡಿವೈಎಸ್ಪಿ ವಿಜಯ ಬಿರಾದಾರ ನೇತೃತ್ವದಲ್ಲಿ ದಾಳಿ ನಡೆಯಿತು. ಲೋಕೊಪಯೋಗಿ ಇಲಾಖೆಯ ಸೆಕ್ಷನ್ ಎಂಜಿನಿಯರ್ ಅಮೀನ್ ಮುಕ್ತಾರ್  ಅವರ ಕಲಬುರುಗಿ ನಿವಾಸದ ಮೇಲೆ ಇಂದು ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇದೇ ವೇಳೆ ಹೊಸಪೇಟೆ ಲೋಕಾಯುಕ್ತ ಇನ್ಸ್‌ಪೆಕ್ಟರ್ ಅಮರೇಶ್ ಹುಬ್ಬಳ್ಳಿ ಅವರ ನೇತೃತ್ವದ ತಂಡ ಬಳ್ಳಾರಿಯಲ್ಲಿರುವ ಲೋಕೊಪಯೋಗಿ ಇಲಾಖೆಯ ವೃತ್ತ ಕಚೇರಿ ಮೇಲೆ ದಾಳಿ ಮಾಡಿ ಪರಿಶೀಲನೆ ನಡೆಸುತ್ತಿದೆ.

<><><>

ಬೆಳಗಾವಿ ವಿಭಾಗದ ಮೂರು ಕಡೆಗಳಲ್ಲಿ ಬೆಳಗಾವಿ ಲೋಕಾಯುಕ್ತರು, ಸರ್ಕಾರಿ ಅಧಿಕಾರಿಗಳ ಮನೆ ಹಾಗೂ ಕಚೇರಿಗಳ ಮೇಲೆ ಇಂದು ಮುಂಜಾನೆ ದಾಳಿ ಮಾಡಿ ತನಿಖೆ ನಡೆಸುತ್ತಿದ್ದಾರೆ. ಬೆಳಗಾವಿ ಲೋಕಾಯುಕ್ತ ಎಸ್ಪಿ ಹನುಮಂತರಾಯ ನೇತೃತ್ವದ ತಂಡ ದೇವರಾಜು ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ಸಿದ್ದಲಿಂಗಪ್ಪ ಬಾನಸಿ ಅವರ ಬೆಳಗಾವಿ ವಿದ್ಯಾನಗರದಲ್ಲಿ ನಿವಾಸದ ಮೇಲೆ, ರಾಯಬಾಗ ತಾಲೂಕಿನ ಬೆಕ್ಕೇರಿ ಗ್ರಾಮದಲ್ಲಿನ ಅವರ ಮನೆ ಹಾಗೂ ಕಚೇರಿಯ ಮೇಲೆ ದಾಳಿ ನಡೆಸಲಾಗಿದೆ. ಧಾರವಾಡದ ಲೋಕೋಪಯೋಗಿ ಇಲಾಖೆಯ ಮುಖ್ಯ ಎಂಜಿನಿಯರ್ ಸುರೇಶ ಅವರ ಬೆಳಗಾವಿ ಹನುಮಾನ ನಗರದ ಮನೆಯ ಮೇಲೆ ದಾಳಿ ಮಾಡಿ, ಮಹತ್ವದ ಕಾಗದಪತ್ರಗಳನ್ನು ವಶಪಡಿಸಿಕೊಂಡು, ತನಿಖೆ ನಡೆಸಲಾಗುತ್ತಿದೆ.

<><><>

ಚಂಡಮಾರುತದ ಪರಿಣಾಮ ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಒಂದು ವಾರ ನಿರಂತರವಾಗಿ ಸುರಿದ ಮಳೆ, ಕಳೆದ ಎರಡು ದಿನಗಳಿಂದ ಬಿಡುವು ನೀಡಿದೆ. ಮಹಾರಾಷ್ಟ್ರದಲ್ಲಿಯೂ ಮಳೆಯ ಪ್ರಮಾಣ ಕಡಿಮೆ ಆಗಿರುವುದರಿಂದ  ತುಂಬಿ ಹರಿಯುತ್ತಿದ್ದ ಕೃಷ್ಣಾ ನದಿ ಸೇರಿದಂತೆ ಅದರ ಉಪ ನದಿಗಳ ನೀರಿನ ಮಟ್ಟ ಕಡಿಮೆಯಾಗಿದೆ. ನದಿಗಳಲ್ಲಿ ಮುಳಗಿ ಹೋಗಿದ್ದ ಚಿಕ್ಕೋಡಿ ತಾಲೂಕಿನ ಕೆಳಹಂತದ

ಸೇತುವೆಗಳು ತೆರವುಗೊಂಡಿದ್ದು, ಸಂಪರ್ಕಕ್ಕೆ ಅನುಕೂಲವಾಗಿದೆ. ರೈತರು ಕೃಷಿ ಚಟುವಟಿಯಲ್ಲಿ ತೊಡಗಿಕೊಂಡಿದ್ದಾರೆ. ಕಳೆದ ಎರಡು ವಾರಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯಾಗಿದ್ದು, ಇಂದು ಕೊಂಚ ಬಿಡುವು ನೀಡಿದೆ. ಬೆಳಗ್ಗಿನಿಂದ ಬಿಸಿಲಿನ ವಾತಾವರಣ ಕಂಡುಬರುತ್ತಿದ್ದು, ಜನಜೀವರ ಸಹಜ ಸ್ಥಿತಿಗೆ ಮರಳುತ್ತಿದೆ. ನಿನ್ನೆ ಸುರಿದ ಭಾರೀ ಮಳೆಯ ಕಾರಣ ಹಲವೆಡೆ ಗುಡ್ಡ ಕುಸಿತದಿಂದ ಪ್ರಾಣ ಹಾನಿ ಸಂಭವಿಸಿದ್ದು, ತಗ್ಗು ಪ್ರದೇಶಗಳು ಜಲಾವೃತಗೊಂಡು ನೂರಾರು ಮನೆಗಳಿಗೆ ನೀರು ನುಗ್ಗಿತ್ತು. ಭಾರೀ ಮಳೆಯ ಕಾರಣ ಇಂದು ಕೂಡ ಜಿಲ್ಲೆಯ ಎಲ್ಲಾ ಅಂಗನವಾಡಿ ಮತ್ತು ಶಾಲಾ ಕಾಲೇಜುಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ.

<><><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತೀವ್ರ ಮಳೆಯಾಗುತ್ತಿದ್ದು, ಸಾರ್ವಜನಿಕರ ಜೀವಹಾನಿ ತಪ್ಪಿಸಲು ಸರಕಾರ ಗರಿಷ್ಠ ಆದ್ಯತೆ ನೀಡಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮಂಗಳೂರಿನಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಜಿಲ್ಲೆಯ ಅತಿವೃಷ್ಟಿ ನಿರ್ವಹಣೆ ಕುರಿತು ಸಭೆ ನಡೆಸಿದ ಅವರು, ಸಂಭಾವ್ಯ ಭೂಕುಸಿತ ಪ್ರದೇಶಗಳನ್ನು ಮೊದಲೇ ಗುರುತಿಸಿ, ಅಲ್ಲಿ ನೆಲೆಸಿರುವವರನ್ನು ಸ್ಥಳಾಂತರಿಸಬೇಕು. ಸ್ಥಳೀಯ ಮಟ್ಟದ ಅಧಿಕಾರಿಗಳು ಸಾರ್ವಜನಿಕರ ಅಹವಾಲುಗಳಿಗೆ ತಕ್ಷಣವೇ ಸ್ಪಂದಿಸಬೇಕು. ತಾಲೂಕು ಮತ್ತು ಜಿಲ್ಲಾ ಮಟ್ಟದ ಕಂಟ್ರೋಲ್ ರೂಂಗಳು ದಿನದ ೨೪ ಗಂಟೆ ಕಾರ್ಯನಿರ್ವಹಿಸಬೇಕು ಎಂದು ಸೂಚನೆ ನೀಡಿದರು. ನಗರದ ಪಂಪ್ ವೆಲ್, ಕೊಟ್ಟಾರಚೌಕಿ, ಕೆತ್ತಿಕಲ್ ಸೇರಿದಂತೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರತಿವರ್ಷ ಮಳೆಯಿಂದ ಸಮಸ್ಯೆ ಉಂಟಾಗುತ್ತಿರುವ ಸ್ಥಳಗಳಲ್ಲಿ ಶಾಶ್ವತ ಪರಿಹಾರಕ್ಕೆ ಹೆದ್ದಾರಿ ಪ್ರಾಧಿಕಾರವು ಸೂಕ್ತ ತಂತ್ರಜ್ಞಾನ ಅನ್ವಯಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಸಚಿವ ದಿನೇಶ್ ಗುಂಡೂರಾವ್, ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕರಿಗೆ ಸೂಚಿಸಿದರು. ನಂತರ ಅವರು, ಪ್ರಾಕೃತಿಕ ವಿಕೋಪದಿಂದ ಜಿಲ್ಲೆಯಲ್ಲಿ ಮೃತಪಟ್ಟವರ ಮನೆಗಳಿಗೆ ಭೇಟಿ ನೀಡಿ, ಕುಟುಂಬದವರಿಗೆ ಸಾಂತ್ವಾನ ಹೇಳಿದರು. ಇದೇ ಸಂದರ್ಭ ಅವರು ರಾಜ್ಯ ಸರಕಾರದ ವತಿಯಿಂದ ತಲಾ ಐದು ಲಕ್ಷ ಪರಿಹಾರ ನೆರವು ವಿತರಿಸಿದರು.

<><><>

ಭಾರತ ಆದರ್ಶ, ವೈಚಾರಿಕತೆಯ ದೇಶ. ಅಹಲ್ಯಾಬಾಯಿ ಹೋಳ್ಕರ್ ನಮಗೆ ಪ್ರೇರಕಶಕ್ತಿ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು. ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಇಂದು ಆಯೋಜಿಸಿದ್ದ ಅಹಲ್ಯಬಾಯಿ ಹೋಳ್ಕರ್ ಅವರ ೩೦೦ನೇ ಜನ್ಮದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<><><>

ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಆಶ್ರಯದಲ್ಲಿ ಗದಗ ಜಿಲ್ಲೆಯ ರೋಣ ತಾಲೂಕಿನ ಮುದೇನಗುಡಿ, ಹಿರೇಮಣ್ಣೂರು, ತಳ್ಳಿಹಾಳ, ಅಸೂಟಿ, ಕರಮುಡಿ  ಗ್ರಾಮಗಳಲ್ಲಿ ಜರುಗಿತು. ಅಭಿಯಾನದ ಅಂಗವಾಗಿ ಕೃಷಿ ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಕೃಷಿ ವಿಜ್ಞಾನಿಗಳು ಬೀಜೋಪಚಾರ, ಸುಧಾರಿತ ತಳಿಗಳು, ತೋಟಗಾರಿಕೆ ಬೆಳೆಗಳು, ಸಿರಿಧಾನ್ಯ ಹಾಗೂ ಅವುಗಳ ಮಹತ್ವ, ಕೃಷಿ ಯಂತ್ರೋಪಕರಣಗಳು, ಸಮಗ್ರ ಕೃಷಿ ಪದ್ಧತಿಯ ತರಬೇತಿಯನ್ನು ರೈತರಿಗೆ ನೀಡಿದರು.

ಮುಂಗಾರು ಬೆಳೆಗಳ ಬೇಸಾಯ ಕ್ರಮಗಳು, ಕೀಟ ಹಾಗೂ ರೋಗ ನಿರ್ವಹಣೆ ಕುರಿತು ಮಾಹಿತಿ ಕೈಪಿಡಿಯನ್ನು ಇದೇ ಸಂದರ್ಭದಲ್ಲಿ ರೈತರಿಗೆ ವಿತರಿಸಲಾಯಿತು. ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಕುರಿತು ಗದಗ ಜಿಲ್ಲೆಯ ಅಸೂಟಿ ಗ್ರಾಮದ ರೈತ ಯಲ್ಲಪ್ಪಗೌಡ ಪಾಟೀಲ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಬೈಟ್ : ಯಲ್ಲಪ್ಪಗೌಡ ಪಾಟೀಲ, ರೈತ (೨೫ ಸೆಕೆಂಡ್)

<><><><>

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಈವರೆಗೆ ನಾಲ್ಕು ಕೋವಿಡ್ ಪ್ರಕರಣಗಳು ದೃಢಪಟ್ಟಿವೆ. ಮೇ ೨೫ ರಿಂದ ಕೋವಿಡ್ ಪರೀಕ್ಷೆ ಆರಂಭಿಸಿದ್ದು, ೧೩ ಮಾದರಿಗಳನ್ನು ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆಗೆ ಕೋವಿಡ್ ಪರೀಕ್ಷೆಗಾಗಿ ಕಳುಹಿಸಿಕೊಡಲಾಗಿತ್ತು. ಈ ಪೈಕಿ ನಾಲ್ಕು ಪ್ರಕರಣಗಳು ದೃಢಪಟ್ಟಿವೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>